**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.04.2025** **19.35 P.M.**

*****************

ಮುಖ್ಯಾಂಶಗಳು

- ಯಮುನಾ ನದಿ ಸ್ವಚ್ಛತೆ ಕುರಿತು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿಂದು ಮಹತ್ವದ ಸಭೆ
- ಜನರಿಂದ ಆಯ್ಕೆಯಾದ ಸರ್ಕಾರ ಸಂಸತ್ತಿಗೆ ಜವಾಬ್ದಾರರಾಗಬೇಕು - ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್
- ಸ್ಮಾರ್ಟ್ ಫೋನ್ ರಫ್ತಿನಲ್ಲಿ ಅಗ್ರ ಸ್ಥಾನಕ್ಕೇರಿದ ಭಾರತ; ೨ ಲಕ್ಷ ಕೋಟಿ ರೂಪಾಯಿ ಮೌಲ್ಯದ ಉತ್ಪನ್ನ ರಫ್ತು
- ದೇಶದ ಆರ್ಥಿಕಾಭಿವೃದ್ಧಿಯಲ್ಲಿ ಷೇರು ಮಾರುಕಟ್ಟೆ ಪಾತ್ರ ಅನನ್ಯ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್
- ಐಪಿಎಲ್ ಟಿ-೨೦ ಕ್ರಿಕೆಟ್: ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ

******************

ಯಮುನಾ ನದಿಯ ಪ್ರಸ್ತುತ ಸ್ಥಿತಿಯನ್ನು ನಿರ್ಣಯಿಸಲು ಮತ್ತು ಅದರ ಶುದ್ಧೀಕರಣ ಮತ್ತು ಪುನರುಜ್ಜೀವನಕ್ಕಾಗಿ ನಡೆಯುತ್ತಿರುವ ಮತ್ತು ಭವಿಷ್ಯದ ಯೋಜನೆಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿಂದು ಸಮಗ್ರ ಪರಿಶೀಲನೆ ನಡೆಸಲಾಯಿತು.

ನದಿಯನ್ನು ಸ್ವಚ್ಛಗೊಳಿಸುವ ಕ್ರಿಯಾ ಯೋಜನೆಯನ್ನು ಪರಿಶೀಲಿಸಲಾಯಿತು. ಚರಂಡಿಗಳಲ್ಲಿನ ಹರಿವನ್ನು ಅಳೆಯಲು ಮತ್ತು ಒಳಚರಂಡಿ ಸಂಸ್ಕರಣಾ ಘಟಕಗಳ ಕಾರ್ಯನಿರ್ವಹಣೆಯನ್ನು ಮೇಲ್ವಿಚಾರಣೆ ಮಾಡಲು ಸೂಕ್ಷ್ಮ ಮಟ್ಟದ ನೈಜ-ಸಮಯದ ದತ್ತಾಂಶವನ್ನು ಸಂಗ್ರಹಿಸಲು ಲಭ್ಯವಿರುವ ಅತ್ಯುತ್ತಮ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕು ಎಂದು ನರೇಂದ್ರ ಮೋದಿ ಅವರು ಸಲಹೆ ನೀಡಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ, ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಸರ್ಕಾರದ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

******************

ಬೆಂಗಳೂರಿನ ಕರ್ನಾಟಕ ಮತ್ತು ಗೋವಾ ಪ್ರಾದೇಶಿಕ ವಿಭಾಗದ ಆದಾಯ ತೆರಿಗೆ ಕಚೇರಿಯಿಂದ ಈ ತಿಂಗಳ ೨೮ ರಂದು ಉದ್ಯೋಗ ಮೇಳ ಆಯೋಜಿಸಲಾಗಿದೆ.

ಬೆಂಗಳೂರಿನ ಕ್ವೀನ್ಸ್ ರಸ್ತೆಯ ಸಿ.ಆರ್. ಬಿಲ್ಡಿಂಗ್‌ನ ಕಾವೇರಿ ಹಾಲ್‌ನಲ್ಲಿ ಉದ್ಯೋಗ ಮೇಳ ನಡೆಯಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

******************

ಶಾಸನಸಭೆಗಳಿಂದ ಅನುಮೋದನೆಗೊಂಡ ಮಸೂದೆಗಳಿಗೆ ಗಡುವು ನೀಡುವ ಕುರಿತು ನಿರ್ಧರಿಸಲು ಸಮಯ ನಿಗದಿಪಡಿಸಿದ ಸುಪ್ರೀಂ ಕೋರ್ಟ್‌ನ ಇತ್ತೀಚಿನ ತೀರ್ಪನ್ನು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರಶ್ನೆ ಮಾಡಿದ್ದಾರೆ. ನ್ಯಾಯಾಲಯವು ಭಾರತದ ರಾಷ್ಟ್ರಪತಿಗಳಿಗೆ ನಿರ್ದೇಶಿಸುವ ಪರಿಸ್ಥಿತಿ ಇರಲು ಸಾಧ್ಯವಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ನವದೆಹಲಿಯಲ್ಲಿಂದು ರಾಜ್ಯಸಭೆ ಸಚಿವಾಲಯದ ಕಾರ್ಯಚಟುವಟಿಕೆಗಳ ಬಗ್ಗೆ ತರಬೇತಿ ಪಡೆದ ೬ನೇ ಬ್ಯಾಚ್ ಅನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರ ಜನರಿಂದ ಆಯ್ಕೆಯಾದಾಗ, ಅದು ಸಂಸತ್ತಿಗೆ ಜವಾಬ್ದಾರರಾಗಿರುತ್ತದೆ. ಶಾಸಕಾಂಗ, ನ್ಯಾಯಾಂಗ ಮತ್ತು ಕಾರ್ಯಾಂಗ ಎಂಬ ಮೂರು ಸಂಸ್ಥೆಗಳು ಅರಳಬೇಕಾದ ಸಮಯ ಬಂದಿದೆ ಎಂದು ಅವರು ಒತ್ತಿ ಹೇಳಿದರು.

ಧ್ವನಿ: ಉಪರಾಷ್ಟ್ರಪತಿ

******************

ಕಳೆದ ಹಣಕಾಸು ವರ್ಷದಲ್ಲಿ ದೇಶದ ಸ್ಮಾರ್ಟ್ ಫೋನ್ ರಫ್ತು ಮೌಲ್ಯ ೨ ಲಕ್ಷ ಕೋಟಿ ರೂಪಾಯಿ ತಲುಪಿದ್ದು, ಇದು ಗರಿಷ್ಠ ದಾಖಲೆಯಾಗಿದೆ. ಕಳೆದ ೧೦ ತಿಂಗಳಲ್ಲಿ ದೇಶದ ರಫ್ತಿನಲ್ಲಿ ಸ್ಮಾರ್ಟ್ ಫೋನ್ ಅಗ್ರಸ್ಥಾನದಲ್ಲಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

೨೦೧೪ರ ಸಾಲಿನಲ್ಲಿ ದೇಶದ ರಫ್ತಿನಲ್ಲಿ ೧೬೭ನೇ ಸ್ಥಾನದಲ್ಲಿದ್ದ ಭಾರತ, ಕಳೆದ ೧೦ ವರ್ಷಗಳಲ್ಲಿ ಕೈಗೊಂಡ ರಚನಾತ್ಮಕ ಕ್ರಮಗಳಿಂದಾಗಿ ಇದೀಗ ಸ್ಮಾರ್ಟ್ ಫೋನ್ ರಫ್ತು ಚಟುವಟಿಕೆಯಲ್ಲಿ ಪ್ರಥಮ ಸ್ಥಾನಕ್ಕೇರಿದೆ. ಈ ವಲಯದಲ್ಲಿ ಮಹಿಳೆಯರು ಸೇರಿದಂತೆ ಯುವಜನರಿಗೆ ಲಕ್ಷಾಂತರ ಉದ್ಯೋಗಗಳು ಸೃಷ್ಟಿಯಾಗುತ್ತಿವೆ ಎಂದು ಅವರು ವಿವರಿಸಿದ್ದಾರೆ.

******************

ಬಾಂಬೆ ಷೇರು ಮಾರುಕಟ್ಟೆ ಮತ್ತು ಭಾರತದ ಆರ್ಥಿಕ ಅಭಿವೃದ್ಧಿಯಲ್ಲಿ ಅದರ ಪ್ರಮುಖ ಪಾತ್ರವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಶ್ಲಾಘಿಸಿದ್ದಾರೆ.

ಏಷ್ಯಾದ ಅತ್ಯಂತ ಹಳೆಯ ಷೇರುಮಾರುಕಟ್ಟೆ ೧೫೦ನೇ ವಾರ್ಷಿಕೋತ್ಸವವನ್ನು ಆಚರಿಸುವ ಮೂಲಕ ಐತಿಹಾಸಿಕ ಮೈಲಿಗಲ್ಲನ್ನು ಗುರುತಿಸಿದೆ. ಮುಂಬೈನಲ್ಲಿ ಈ ಸ್ಮರಣಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿಎಸ್‌ಇ ಪ್ರತಿದಿನ ಸಹಸ್ರಾರು ಕೋಟಿ ರೂಪಾಯಿ ಮೌಲ್ಯದ ಬೇಡಿಕೆಗಳನ್ನು ಪೂರೈಸುತ್ತದೆ. ಅತ್ಯಾಧುನಿಕ ತಂತ್ರಜ್ಞಾನದ ಸರಾಗ ಏಕೀಕರಣದ ಪ್ರತೀಕವಾಗಿ ಇದು ಕಾರ್ಯನಿರ್ವಹಿಸುತ್ತಿದೆ. ಭಾರತದ ಆರ್ಥಿಕತೆ ಎಲ್ಲಿಗೆ ಸಾಗುತ್ತಿದೆ ಎಂಬುದರ ಸೂಚಕ ಇದಾಗಿದೆ ಎಂದು ಅವರು ಹೇಳಿದರು.

******************

ಮಧ್ಯಪ್ರದೇಶದ ನೀಮಚ್‌ನಲ್ಲಿ ಸಿಆರ್‌ಪಿಎಫ್‌ನ ೮೬ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗಿಯಾಗಿದ್ದರು. ಈ ವೇಳೆ ಮಾತನಾಡಿದ ಅವರು, ಬರುವ ೨೦೨೬ರ ಮಾರ್ಚ್ ಅಂತ್ಯದ ವೇಳೆಗೆ ನಕ್ಸಲಿಸಂ ಅನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುವುದು ಮತ್ತು ಈ ಕಾರ್ಯದಲ್ಲಿ ಸಿಆರ್‌ಪಿಎಫ್ ಜವಾನರು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದರು.

ಕೋಬ್ರಾ ಬೆಟಾಲಿಯನ್‌ನ ಸೈನಿಕರು ದೇಶವನ್ನು ನಕ್ಸಲ್ ಮುಕ್ತಗೊಳಿಸುವಲ್ಲಿ ಅಭೂತಪೂರ್ವ ಕೆಲಸ ಮಾಡುತ್ತಿದ್ದಾರೆ. ದೇಶದ ಅಮರ ಹುತಾತ್ಮರ ತ್ಯಾಗಕ್ಕೆ ಗೌರವ ಸಲ್ಲಿಸಿದ ಅಮಿತ್ ಶಾ, ಭಾರತದ ಇತಿಹಾಸವನ್ನು ಬರೆಯುವಾಗ, ಭದ್ರತಾ ಪಡೆಗಳ ಅಮರ ಹುತಾತ್ಮರ ಶೌರ್ಯದ ಕಥೆಯನ್ನು ಮೊದಲು ಸುವರ್ಣಾಕ್ಷರಗಳಲ್ಲಿ ಬರೆಯಲಾಗುತ್ತದೆ. ಹುತಾತ್ಮರಾದ ಎಲ್ಲಾ ಸಿಆರ್‌ಪಿಎಫ್ ಜವಾನರ ಕುಟುಂಬಗಳನ್ನು ಶ್ಲಾಘಿಸಿದರು. ದೇಶವು ಬಲಿಷ್ಠ ಮತ್ತು ಸಮೃದ್ಧವಾಗುತ್ತಿದ್ದು ಇದರಲ್ಲಿ ನಿಮ್ಮ ಕುಟುಂಬದ ಕೊಡುಗೆಯನ್ನು ಹೋಲಿಸಲಾಗದು ಎಂದು ಹೇಳಿದರು.

******************

ಹುಲಿ ಸೇರಿದಂತೆ ಪ್ರಮುಖ ಏಳು ವನ್ಯ ಜೀವಿ ಸಂರಕ್ಷಣೆ ಕುರಿತಂತೆ ಭಾರತ ಮತ್ತು ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲೈಯನ್ಸ್ ನಡುವೆ ನವದೆಹಲಿಯಲ್ಲಿಂದು ಒಪ್ಪಂದಕ್ಕೆ ಸಹಿ ಹಾಕಲಾಗಿದೆ.

ವಿದೇಶಾಂಗ ವ್ಯವಹಾರಗಳ ಕಾರ್ಯದರ್ಶಿ ಪಿ. ಕುಮಾರನ್ ಮತ್ತು ಐಬಿಸಿಎ ಮಹಾನಿರ್ದೇಶಕ ಡಾ.ಎಸ್.ಪಿ. ಯಾದವ್ ಈ ಒಪ್ಪಂದಕ್ಕೆ ಅಂಕಿತ ಹಾಕಿದರು.

ಈ ಒಪ್ಪಂದದಂತೆ ೨೦೨೩-೨೪ ರಿಂದ ೨೦೨೮-೨೯ ರವರೆಗೆ ಐದು ವರ್ಷಗಳ ಕಾಲ ಮೂಲಸೌಕರ್ಯವನ್ನು ನಿರ್ಮಿಸಲು ಮತ್ತು ಪುನರಾವರ್ತಿಸುವ ವೆಚ್ಚಗಳನ್ನು ಪೂರೈಸಲು ಕೇಂದ್ರ ಸರ್ಕಾರವು ಐಬಿಸಿಎಗೆ ೧೫೦ ಕೋಟಿ ರೂಪಾಯಿ ಆರ್ಥಿಕ ನೆರವು ಒದಗಿಸುತ್ತಿದೆ.

೨೦೨೩ರಲ್ಲಿ ಮೈಸೂರಿನಲ್ಲಿ ನಡೆದ "ಪ್ರಾಜೆಕ್ಟ್ ಟೈಗರ್‌ನ ೫೦ ವರ್ಷಗಳ ಸ್ಮರಣಾರ್ಥ" ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಂತರರಾಷ್ಟ್ರೀಯ ಬಿಗ್ ಕ್ಯಾಟ್ ಅಲೈಯನ್ಸ್ ಅನ್ನು ಪ್ರಾರಂಭಿಸಿದರು. ಐಬಿಸಿಎ ಪ್ರಾಥಮಿಕವಾಗಿ ಹುಲಿ, ಸಿಂಹ, ಚಿರತೆ, ಹಿಮ ಚಿರತೆ, ಜಾಗ್ವಾರ್ ಮತ್ತು ಪೂಮಾ ಎಂಬ ಏಳು ದೊಡ್ಡ ಬೆಕ್ಕುಗಳ ಸಂರಕ್ಷಣೆಯ ಗುರಿ ಹೊಂದಿದೆ.

*****************

ದೇಶದಲ್ಲಿ ಜಲ ಹಾಗೂ ಜೀವವೈವಿಧ್ಯತೆಯನ್ನು ಪುನಃಸ್ಥಾಪಿಸುವುದು, ನದಿ ನೀರಿನ ಗುಣಮಟ್ಟ ಸುಧಾರಿಸುವ ಮತ್ತು ನದಿ ಸಂರಕ್ಷಣೆಯಲ್ಲಿ ಸಮುದಾಯಗಳನ್ನು ತೊಡಗಿಸಿಕೊಳ್ಳುವಲ್ಲಿ ರಾಷ್ಟ್ರೀಯ ಸ್ವಚ್ಛ ಗಂಗಾ ಮಿಷನ್ ಮತ್ತು ಭಾರತೀಯ ವನ್ಯಜೀವಿ ಸಂಸ್ಥೆ ನಡೆಸುತ್ತಿರುವ ಸಾಮಾಜಿಕ ಕಾರ್ಯಗಳಿಗೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರೀಯ ಸ್ವಚ್ಛ ಗಂಗಾ ಅಭಿಯಾನದಡಿ ಭಾರತೀಯ ವನ್ಯಜೀವಿ ಸಂಸ್ಥೆಯ ವಿವಿಧ ಯೋಜನೆಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ವೇದಿಕೆಯು ಗಂಗಾ, ಕಾವೇರಿ, ಗೋದಾವರಿ ಮುಂತಾದ ಪ್ರಮುಖ ಭಾರತೀಯ ನದಿಗಳ ಭೌಗೋಳಿಕ, ಜೀವವೈವಿಧ್ಯ ಮತ್ತು ಸಮುದಾಯ ಚಟುವಟಿಕೆಗಳ ಬಗ್ಗೆ ಮಾಹಿತಿ ಒದಗಿಸಲಿದೆ. ಗಂಗಾ ನದಿ ತೀರದ ಪ್ರದೇಶಗಳಲ್ಲಿ ಭಾರತೀಯ ವನ್ಯಜೀವಿ ಸಂಸ್ಥೆ ನಡೆಸಿದ ಜಾಗೃತಿ ಶ್ಲಾಘನೀಯ ಎಂದರು.

*****************

ಹೊಸ ಆದಾಯ ತೆರಿಗೆ ಮಸೂದೆ- ೨೦೨೫ ಕ್ಕೆ ಸಂಬಂಧಿಸಿದಂತೆ ಲೋಕಸಭೆಯ ಪರಿಶೀಲನಾ ಸಮಿತಿ ಇಂದು ನವದೆಹಲಿಯ ಸಂಸತ್ ಭವನದಲ್ಲಿ ಸಭೆ ನಡೆಸಿತು.

ಬಿಜೆಪಿ ಸಂಸದ ಬೈಜಯಂತ್ ಪಾಂಡ ನೇತೃತ್ವದ ೩೧ ಸದಸ್ಯರ ಸಮಿತಿ ಸಂಸತ್ತಿನ ಮುಂಗಾರು ಅಧಿವೇಶನದ ವೇಳೆಗೆ ತನ್ನ ವರದಿ ಸಲ್ಲಿಸುವ ನಿರೀಕ್ಷೆಯಿದೆ. ಈ ಮಸೂದೆಯನ್ನು ಬಜೆಟ್ ಅಧಿವೇಶನದ ಮೊದಲ ಚರಣದಲ್ಲಿ ಲೋಕಸಭೆಯಲ್ಲಿ ಮಂಡಿಸಲಾಗಿತ್ತು.

*****************

ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತ ಶೇಕಡ ೬.೫ರಷ್ಟು ಅಭಿವೃದ್ಧಿ ದರದೊಂದಿಗೆ ಅತಿವೇಗದಲ್ಲಿ ವೃದ್ಧಿಯಾಗುತ್ತಿರುವ ಆರ್ಥಿಕತೆಯಾಗಿ ಮುಂದುವರೆದಿದೆ ಎಂದು ವಿಶ್ವ ಸಂಸ್ಥೆ ತಿಳಿಸಿದೆ.

”ವ್ಯಾಪಾರ ಮತ್ತು ಅಭಿವೃದ್ಧಿ ಅಂದಾಜು ಕುರಿತ ೨೦೨೫” ವರದಿಯಲ್ಲಿ ವಿಶ್ವ ಸಂಸ್ಥೆ ಈ ವಿವರ ನೀಡಿದ್ದು, ಜಾಗತಿಕ ಹಿಂಜರಿಕೆ ಭೀತಿಯ ನಡುವೆಯೂ ಭಾರತ ತನ್ನ ಸದೃಢ ಸುಧಾರಣಾ ನೀತಿಗಳಿಂದಾಗಿ ಸುಸ್ಥಿರವಾಗಿ ಮುಂದುವರೆಯುತ್ತಿದೆ ಎಂದು ತಿಳಿಸಿದೆ.

******************

ಇಂಡಿಯನ್ ಪ್ರೀಮಿಯರ್ ಲೀಗ್ ಟಿ-೨೦ ಪಂದ್ಯಾವಳಿಯಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಸನ್ ರೈಸರ್ಸ್ ಹೈದಾರಾಬಾದ್ ತಂಡಗಳು ಇದೀಗ ಮುಖಾಮುಖಿಯಾಗಿವೆ.

ಮುಂಬೈನಲ್ಲಿ ನಡೆಯುತ್ತಿರುವ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

******************

ರಾಜ್ಯ ಸರ್ಕಾರ ನಡೆಸಿರುವ ಜಾತಿ ಗಣತಿ ವರದಿ ಸೋರಿಕೆಯಾಗಿರುವ ಬಗ್ಗೆ ಸಮಗ್ರ ತನಿಖೆಗೆ ಆದೇಶಿಸಬೇಕೆಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬಹಿರಂಗವಾಗಿರುವ ವರದಿ ಕುರಿತು ಸಚಿವ ಸಂಪುಟದಲ್ಲಿ ಚರ್ಚೆಮಾಡುವ ಅಗತ್ಯವಿಲ್ಲ. ಒಂದು ವೇಳೆ ಮಾಡಿದಲ್ಲಿ ಸಚಿವ ಸಂಪುಟದ ಪಾವಿತ್ರ್ಯತೆಗೆ ಧಕ್ಕೆ ಉಂಟಾಗಲಿದೆ ಎಂದು ಹೇಳಿದ್ದಾರೆ.

ಸರ್ವಜನಾಂಗದ ಶಾಂತಿಯ ತೋಟದಂತಿರುವ ರಾಜ್ಯದಲ್ಲಿ ಜಾತಿ ಗಣತಿ ನಡೆಸುವ ಮೂಲಕ ಜನರ ನಡುವೆ ದ್ವೇಷದ ಬೀಜ ಬಿತ್ತುವ ಪ್ರಯತ್ನ ನಡೆದಿದ್ದು, ಇದು ಖಂಡನೀಯ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

******************

ಕೇಂದ್ರ ವಕ್ಫ್ ಮಂಡಳಿ ಮತ್ತು ರಾಜ್ಯ ವಕ್ಫ್ ಮಂಡಳಿಗಳಲ್ಲಿ ಮುಸ್ಲಿಮೇತರರ ನೇಮಕ ಮತ್ತು ನ್ಯಾಯಾಲಯಗಳು ವಕ್ಫ್ ಎಂದು ಘೋಷಿಸಿದ ಆಸ್ತಿಗಳನ್ನು ಡಿ-ನೋಟಿಫೈ ಮಾಡುವ ನಿಬಂಧನೆ ಸೇರಿದಂತೆ ವಕ್ಫ್ ತಿದ್ದುಪಡಿ ಕಾಯಿದೆ, ೨೦೨೫ರ ಕೆಲವು ಪ್ರಮುಖ ಸೆಕ್ಷನ್‌ಗಳಿಗೆ

ಸಂಬಂಧಿಸಿದಂತೆ ಸದ್ಯಕ್ಕೆ ಕ್ರಮ ಕೈಗೊಳ್ಳುವುದಿಲ್ಲ ಎಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಭರವಸೆ ನೀಡಿದೆ.

*********ಮುಕ್ತಾಯ*********